# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2000 (2356)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಬಗ್ಗೆ

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ "ಜಲಜೀವನ್" ಕಾರ್ಯಕ್ರಮದ ಮುಖೇನ ಸರ್ಕಾರಿ ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಯಾವ ಹಂತದಲ್ಲಿದೆ ;

(ಇ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಯೋಜನೆಗೆ ಸರ್ಕಾರವು ನಿಗದಿಪಡಿಸಿದ ಅನುದಾನ/ಖರ್ಚಾದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹೊಂದಿಲ್ಲದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)